1.25 ಲಕ್ಷಕ್ಕಿಂತ ಕಡಿಮೆ ಇರುವ ಅಂದಾಜು ಪಟ್ಟಿಗಳಿಗೆ ಅನುಮೋದನೆ ನೀಡಲಾಗುತ್ತದೆ.

3) ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮ ನಿಯಮಿತ–ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮ ನಿಯಮಿತದ ವ್ಯಾಪ್ತಿಯಲ್ಲಿ ಗಂಗಾಕಲ್ಯಾಣದ ಫಲಾನುಭವಿಗಳಿಗೆ ವಿದ್ಯುತ್ ಸಂಪರ್ಕ ಕಲ್ಪಿಸುವಲ್ಲಿ 8 ವಿದ್ಯುತ್ ಕಂಬಗಳಿಗಿಂತ ಹೆಚ್ಚು ಇರುವ ಯಾವುದೇ ಪ್ರಕರಣಗಳನ್ನು ನಿರಾಕರಿಸಿರುವುದಿಲ್ಲ.

4) ಹುಬ್ಬಳ್ಳಿ ವಿದ್ಯುತ್ ಸರಬರಾಜು ಕಂಪನಿ ನಿಯಮಿತ–ಹುಬ್ಬಳ್ಳಿ ವಿದ್ಯುತ್ ಸರಬರಾಜು ಕಂಪನಿ ನಿಯಮಿತದ ವ್ಯಾಪ್ತಿಯಲ್ಲಿ ಡಾ॥ ಬಿ. ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮದ ವತಿಯಿಂದ ಆಯ್ಕೆಗೊಂಡ ಫಲಾನುಭವಿಗಳಿಗೆ ಯಾವುದೇ ಆರ್ಥಿಕ ಮಿತಿಗೆ ಒಳಪಡಿಸದೆ ವಿದ್ಯುತ್ ಸಂಪರ್ಕ ಕಲ್ಪಿಸಲಾಗುತ್ತಿದೆ. ಆದರೆ ಡಿ. ದೇವರಾಜ್ ಅರಸ್ ಅಭಿವೃದ್ಧಿ ನಿಗಮದ ವತಿಯಿಂದ ಆಯ್ಕೆಗೊಂಡ ಫಲಾನುಭವಿಗಳ ಪಂಪ್‌ಸೆಟ್‌ಗಳಿಗೆ ವಿದ್ಯುತ್ ಸಂಪರ್ಕ ಒದಗಿಸುವಾಗ ಅಂದಾಜು ಪಟ್ಟಿಯು ರೂ. 1,50,000/– ಗಳಿಗಿಂತ ಮೇಲ್ಪಟ್ಟ ಮೊತ್ತವಾದರೆ ಸದರಿ ಅಭಿವೃದ್ಧಿ ನಿಗಮದಿಂದ ಅಥವಾ ಫಲಾನುಭವಿಗಳು ಇಚ್ಛಿಸಿದಲ್ಲಿ ಅವರಿಂದ ಹೆಚ್ಚಿನ ಮೊತ್ತವನ್ನು ಪಾವತಿಸಿಕೊಂಡು ವಿದ್ಯುತ್ ಸಂಪರ್ಕ ಕಲ್ಪಿಸಲಾಗುವುದು.

5) ಗುಲ್ಬರ್ಗಾ ವಿದ್ಯುತ್ ಸರಬರಾಜು ಕಂಪನಿ ನಿಯಮಿತ– ಗುಲ್ಬರ್ಗಾ ವಿದ್ಯುತ್ ಸರಬರಾಜು ಕಂಪನಿ ವ್ಯಾಪ್ತಿಯಲ್ಲಿ ಗಂಗಾ ಕಲ್ಯಾಣ ಯೋಜನೆಯ ಫಲಾನುಭವಿಗಳಿಗೆ 8 ಕಂಬಗಳಿಗಿಂತಲೂ ಹೆಚ್ಚಿದ್ದರೂ ಸಹ ಕಂಬಗಳನ್ನು ಅಳವಡಿಸಿ ವಿದ್ಯುತ್ ಸಂಪರ್ಕ ಕಲ್ಪಿಸಲಾಗುತ್ತಿದೆ.

ಎಂ. ಟಿ. ಕೃಷ್ಣಪ್ಪ ವಿದ್ಯುತ್ ಟಿ.ಸಿ.ಗಳ ಸಮಸ್ಯೆ

155 (213) ಶ್ರೀ ಎಂ. ಟಿ. ಕೃಷ್ಣಪ್ಪ (ತುರುವೇಕೆರೆ):–ಮಾನ್ಯ ಇಂಧನ ಸಚಿವರು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

ಅ) ತುರುವೇಕೆರೆ ಕ್ಷೇತ್ರದಾದ್ಯಂತ ವಿದ್ಯುತ್ ಟಿ.ಸಿ.ಗಳ ಸಮಸ್ಯೆಯಿದ್ದು, ಈ ಸಮಸ್ಯೆಯನ್ನು ನಿವಾರಿಸಲು ಸರ್ಕಾರವು ಕೈಗೊಂಡಿರುವ ಕ್ರಮಗಳೇನು;

ಆ) ತುರುವೇಕೆರೆ ತಾಲ್ಲೂಕಿನ ಸೀಗೆಹಳ್ಳಿಗೆ ವಿದ್ಯುತ್ ಸ್ಟೇಷನ್ ಮಂಜೂರಾಗಿದ್ದು ಯಾವಾಗ ಹಾಗೂ ಈ ಕಾಮಗಾರಿಯನ್ನು ಯಾವಾಗ ಪ್ರಾರಂಭ ಮಾಡಲಾಗುವುದು?

ಶೋಭಾ ಕರಂದ್ಲಾಜೆ (ಇಂಧನ ಸಚಿವರು):–

ಅ) ತಿಪಟೂರು ವಿಭಾಗ ತುರುವೇಕೆರೆ ಕ್ಷೇತ್ರದಲ್ಲಿ ವಿದ್ಯುತ್ ಪರಿವರ್ತಕ ದುರಸ್ತಿ ಕೇಂದ್ರವನ್ನು ಸ್ಥಾಪಿಸಲಾಗಿದ್ದು, ಸುಟ್ಟುಹೋದ ವಿದ್ಯುತ್ ಪರಿವರ್ತಕಗಳನ್ನು ದುರಸ್ತಿಗೊಳಿಸಿ ವಿಫಲಗೊಂಡ ವಿದ್ಯುತ್ ಪರಿವರ್ತಕಗಳನ್ನು ಬದಲಾಯಿಸಲಾಗುತ್ತಿದೆ. ವಿಫಲಗೊಂಡ ವಿದ್ಯುತ್ ಪರಿವರ್ತಕಗಳನ್ನು ಹೊಸ ಪರಿವರ್ತಕಗಳ ಮೂಲಕ ಸಹ ಬದಲಾಯಿಸಲಾಗುತ್ತಿದೆ. ಹೆಚ್ಚುವರಿಯಾಗಿ ಕರ್ನಾಟಕ ವಿದ್ಯುತ್ ಕಾರ್ಖಾನೆಗೂ ಸಹ ಪರಿವರ್ತಕಗಳ ದುರಸ್ತಿಗಾಗಿ ಆದೇಶವನ್ನು ನೀಡಲಾಗಿರುತ್ತದೆ.

ಆ) ತುರುವೇಕರೆ ತಾಲ್ಲೂಕಿನ ಸೀಗೆಹಳ್ಳಿಯಲ್ಲಿ ವಿದ್ಯುತ್ ಸ್ಟೇಷನ್‌ನ್ನು ಸ್ಥಾಪಿಸುವ/ ಮಂಜೂರು ಮಾಡುವ ಯಾವುದೇ ಪ್ರಸ್ತಾವನೆಯು ಇದುವರೆಗೆ ಸರ್ಕಾರದ ಮುಂದೆ ಇರುವುದಿಲ್ಲ ಆದ್ದರಿಂದ, ಕಾಮಗಾರಿಯನ್ನು ಪ್ರಾರಂಭಿಸುವ ಪ್ರಶ್ನೆಯು ಉದ್ಭವಿಸುವುದಿಲ್ಲ.

ರಾಜ್ಯದಲ್ಲಿ ಸರ್ಕಾರಿ ಹಾಗೂ ಖಾಸಗಿ ವಿದ್ಯುತ್ ಉತ್ಪಾದನೆ ಘಟಕಗಳು

157 (490) ಶ್ರೀ ಬಂಡೆಪ್ಪ ಕಾಶೆಂಪೂರ್ (ಬೀದರ್ ದಕ್ಷಿಣ):–ಮಾನ್ಯ ಇಂಧನ ಸಚಿವರು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

ಅ) ರಾಜ್ಯದಲ್ಲಿ ಸರ್ಕಾರಿ ಮತ್ತು ಖಾಸಗಿ ವಿದ್ಯುತ್ ಉತ್ಪಾದನಾ ಘಟಕಗಳ ಸಂಖ್ಯೆ ಎಷ್ಟು ಮತ್ತು ಯಾವುವು (ವಿವರಗಳನ್ನು ನೀಡುವುದು);

ಆ) ಸರ್ಕಾರಿ ಮತ್ತು ಖಾಸಗಿ ವಿದ್ಯುತ್ ಉತ್ಪಾದನಾ ಘಟಕಗಳು ಎಷ್ಟು ಮೆಗಾವ್ಯಾಟ್ ವಿದ್ಯುತ್ ಉತ್ಪಾದಿಸುತ್ತಿವೆ (ಪೂರ್ಣ ವಿವರಗಳನ್ನು ನೀಡುವುದು);

ಇ) ಸರ್ಕಾರಿ ಮತ್ತು ಖಾಸಗಿ ವಿದ್ಯುತ್ ಉತ್ಪಾದನಾ ಘಟಕಗಳು ಎಷ್ಟು ಸಾಮರ್ಥ್ಯದ ವಿದ್ಯುತ್‌ನ್ನು ಉತ್ಪಾದಿಸುತ್ತಿವೆ.

ಈ) ಈ ವಿದ್ಯುತ್ ಉತ್ಪಾದನಾ ಘಟಕಗಳಿಗೆ ಕೇಂದ್ರ ಮತ್ತು ರಾಜ್ಯ ಸರ್ಕಾರ ನೀಡಿರುವ ಮೂಲಭೂತ ಸೌಲಭ್ಯಗಳೇನು;

ಉ) ಖಾಸಗಿ ವಿದ್ಯುತ್ ಘಟಕಗಳು ಉತ್ಪಾದಿಸುವ ವಿದ್ಯುತ್ತಿಗೆ ದರ ನಿಗದಿಪಡಿಸುವವರು ಯಾರು, ಈ ದರ ನಿಗದಿಪಡಿಸುವಾಗ ಅನುಸರಿಸುವ ಮಾನದಂಡಗಳೇನು?